## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆ ಮತ್ತು ಪೊಲೀಸ್ ಕಾನ್ಸ್‌ಟೇಬಲ್ (ಸಿ.ಎ.ಆರ್ ಮತ್ತು ಡಿ.ಎ.ಆರ್)ಹುದ್ದೆಗಳಿಗೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಒಂದು ಬಾರಿಗೆ ಮಾತ್ರ ಎರಡು ವರ್ಷಗಳಿಗೆ ಹೆಚ್ಚಿಸುವ ಕುರಿತು.

*****

ಓದಲಾಗಿದೆ

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 282 ಪೊಸಿಅ 2008. ದಿನಾಂಕ:28.05.2009
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 282 ಪೊಸಿಅ 2008. ದಿನಾಂಕ:28.05.2009
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 77 ಪೊಸಿಅ 2013. ದಿನಾಂಕ:22.02.2014
4. ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ/38/ಪಿಪಿಎ/2020. ದಿನಾಂಕ:05.09.2020.
5. ಮಹಾ ನಿರ್ದೇಶಕರು ಹಾಗೂ ಪೊಲೀಸ್ ಮಹಾನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರ ಸಂಖ್ಯೆ:195/ಸಿಬ್ಬಂದಿ-1/2020-21. ದಿನಾಂಕ:21.10.2022.
6. ಸರ್ಕಾರದ ಅಧಿಸೂಚನೆ ಸಂಖ್ಯೆ: 07/ನೇಮಕಾತಿ-4/2022-23 & 09/ನೇಮಕಾತಿ-4/2022-23. ದಿನಾಂಕ:27.10.2022.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಅಧಿಸೂಚನೆಯಲ್ಲಿ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆಗೆ ವಯೋಮಿತಿಯನ್ನು ಸಾಮಾನ್ಯ ವರ್ಗಕ್ಕೆ 25 ವರ್ಷಗಳು ಹಾಗೂ ಎಸ್.ಸಿ / ಎಸ್.ಟಿ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ 27 ವರ್ಷಗಳು ಎಂದು ಹಾಗೂ ಮೇಲೆ ಓದಲಾದ ಕ್ರಮ ಸಂಖ್ಯೆ:(2)ರ ಅಧಿಸೂಚನೆಯಲ್ಲಿ ಪೊಲೀಸ್ ಕಾನ್ಸ್‌ಟೇಬಲ್ (ಸಿ.ಎ.ಆರ್ ಮತ್ತು ಡಿ.ಎ.ಆರ್) ಹುದ್ದೆಗಳಿಗೆ ವಯೋಮಿತಿಯನ್ನು ಸಾಮಾನ್ಯ ವರ್ಗಕ್ಕೆ 25 ವರ್ಷಗಳು ಹಾಗೂ ಎಸ್.ಸಿ / ಎಸ್.ಟಿ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ 27 ವರ್ಷಗಳು ಎಂದು ನಿಗಧಿಪಡಿಸಲಾಗಿರುತ್ತದೆ. ಹಾಗೂ ಮೇಲೆ ಓದಲಾದ ಕ್ರಮ ಸಂಖ್ಯೆ:(3)ರಲ್ಲಿ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆ ಮತ್ತು ಪೊಲೀಸ್ ಕಾನ್ಸ್‌ಟೇಬಲ್ (ಸಿ.ಎ.ಆರ್ ಮತ್ತು ಡಿ.ಎ.ಆರ್) ಹುದ್ದೆಗಳಿಗೆ ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಅಭ್ಯರ್ಥಿಗಳ ಸಂದರ್ಭದಲ್ಲಿ ಗರಿಷ್ಠ ವಯೋಮಿತಿಯನ್ನು 30 ವರ್ಷಗಳು ಎಂದು ನಿಗಧಿಪಡಿಸಲಾಗಿರುತ್ತದೆ. ಮೇಲೆ ಓದಲಾದ ಕ್ರಮ ಸಂಖ್ಯೆ:(4)ರ ಆದೇಶದಲ್ಲಿ ಸಶಸ್ತ್ರ ಪಡೆ ಪೊಲೀಸ್ ಕಾನ್ಸ್‌ಟೇಬಲ್‌ಗಳಿಗೆ ಸಿವಿಲ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ಶೇ 10 ರಷ್ಟು ಮೀಸಲಾತಿಯನ್ನು ಕಲ್ಪಿಸಿ ಗರಿಷ್ಠ ವಯೋಮಿತಿಯನ್ನು ಸಾಮಾನ್ಯ

ವರ್ಗಕ್ಕೆ 31 ವರ್ಷಗಳು ಹಾಗೂ ಎಸ್.ಸಿ / ಎಸ್.ಟಿ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ 33 ವರ್ಷಗಳು ಎಂದು ನಿಗಧಿಪಡಿಸಲಾಗಿರುತ್ತದೆ.

ಕಳೆದ ಮೂರು ವರ್ಷಗಳಿಂದ ಕೋವಿಡ್-19 ಯಿಂದಾಗಿ ನಿಯಮಿತವಾಗಿ ನೇಮಕಾತಿ ನಡೆಯದ ಪ್ರಯುಕ್ತ ಆಕಾಂಕ್ಷಿತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶ ವಂಚಿತವಾಗಿರುವುದರಿಂದ ವಯೋಮಿತಿಯಲ್ಲಿ 02 ವರ್ಷಗಳ ವಿನಾಯಿತಿ ನೀಡುವಂತೆ ಹಲವಾರು ಮನವಿಗಳು ಸ್ವೀಕೃತವಾಗುತ್ತಿರುತ್ತವೆ. ಸ್ವೀಕೃತವಾದ ಮನವಿಗಳನ್ನು ಪರಿಗಣಿಸಿ ಹಾಗೂ ಕೋವಿಡ್-19 ಹಿನ್ನಲೆಯಲ್ಲಿ ಅನೇಕ ಅರ್ಜಿ ಸಲ್ಲಿಸಲಿ ಅವಕಾಶ ವಂಚಿತರಾಗುತ್ತಿರುವುದರಿಂದ ಒಂದು ಬಾರಿಗೆ ಅನ್ವಯವಾಗುವಂತೆ 2022-23ನೇ ಸಾಲಿನಲ್ಲಿ ಕರೆದಿರುವ ಪೊಲೀಸ್ ಕಾನ್ಸ್‌ಟೇಬಲ್ (ಸಿ.ಎ.ಆರ್ ಮತ್ತು ಡಿ.ಎ.ಆರ್) ಹುದ್ದೆಗಳಿಗೆ ಹಾಗೂ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆಗಳಿಗೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಕಂಡ ಪಟ್ಟಿಯಲ್ಲಿ ಸೂಚಿಸಿರುವಂತೆ ಒಂದು ಬಾರಿಗೆ ಅನ್ವಯವಾಗುವಂತೆ ಎರಡು (02) ವರ್ಷಗಳಿಗೆ ಹೆಚ್ಚಿಸುವ ಹಾಗೂ ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕವನ್ನು ಒಂದು ವಾರಗಳ ಕಾಲ ವಿಸ್ತರಿಸುವಂತೆ ಕೋರಿರುತ್ತಾರೆ.

## ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್

| ಕ್ರ.ಸಂ | ವರ್ಗ | ಅರ್ಜಿ ಸಲ್ಲಿಸಲು ನಿಗಧಿಪಡಿಸಬೇಕಾಗಿರುವ ಕೊನೆಯ ದಿನಾಂಕ | ನಿಗಧಿಪಡಿಸಬೇಕಾಗಿರುವ ವಯೋಮಿತಿ (ನೇರ ಅಭ್ಯರ್ಥಿ) | ಸೇವಾ ನಿರತ ಅಭ್ಯರ್ಥಿಗಳು |
|---|---|---|---|---|
| 1 | ಪರಿಶಿಷ್ಟ ಜಾತಿ ಮತ್ತು ಇತರೆ ಹಿಂದುಳಿದ ವರ್ಗ | 28.11.2022 | 29 ವರ್ಷಗಳು | 35 ವರ್ಷಗಳು |
| 2 | ಇತರೆ ಅಭ್ಯರ್ಥಿಗಳು | 28.11.2022 | 27 ವರ್ಷಗಳು | 33 ವರ್ಷಗಳು |
| 3 | ಬುಡಕಟ್ಟು ಜನಾಂಗದ ಅಭ್ಯರ್ಥಿಗಳು | 28.11.2022 | 32 ವರ್ಷಗಳು | - |

## ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್

| ಕ್ರ.ಸಂ | ವರ್ಗ | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | ನಿಗಧಿಪಡಿಸಬೇಕಾಗಿರುವ ವಯೋಮಿತಿ |
|---|---|---|---|
| 1 | ಪರಿಶಿಷ್ಟ ಜಾತಿ ಮತ್ತು ಇತರೆ ಹಿಂದುಳಿದ ವರ್ಗ | 07.11.2022 | 29 ವರ್ಷಗಳು |
| 2 | ಇತರೆ ಅಭ್ಯರ್ಥಿಗಳು | 07.11.2022 | 27 ವರ್ಷಗಳು |
| 3 | ಬುಡಕಟ್ಟು ಜನಾಂಗದ ಅಭ್ಯರ್ಥಿಗಳು | 07.11.2022 | 32 ವರ್ಷಗಳು |

ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ಸರ್ಕಾರದ ಅಧಿಸೂಚನೆಯಲ್ಲಿ, ಅಭ್ಯರ್ಥಿಗಳ ಹಿತದೃಷ್ಟಿಯಿಂದ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅರ್ಜಿಯನ್ನು

ಸಲ್ಲಿಸಲು ಕೊನೆಯ ದಿನಾಂಕವನ್ನು ದಿನಾಂಕ:31.10.2022 ರಿಂದ 30.11.2022ರವರೆಗೆ ವಿಸ್ತರಿಸಿದೆ ಹಾಗೂ ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ:03.11.2022 ರಿಂದ 02.12.2022 ರವರೆಗೆ ಕಾಲಾವಕಾಶವನ್ನು ಕಲ್ಪಿಸಿ ಆದೇಶಿಸಿದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆ ಮತ್ತು ಪೊಲೀಸ್ ಕಾನ್ಸ್‌ಟೇಬಲ್ (ಸಿ.ಎ.ಆರ್ ಮತ್ತು ಡಿ.ಎ.ಆರ್)ಹುದ್ದೆಗಳಿಗೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಒಂದು ಬಾರಿಗೆ ಮಾತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿ.ಎ.ಆರ್ ಮತ್ತು ಡಿ.ಎ.ಆರ್) 420+3064 (ಒಟ್ಟು 3484) ಹುದ್ದೆಗಳಿಗೆ ಹಾಗೂ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) 1137+454 (ಒಟ್ಟು 1591) ಹುದ್ದೆಗಳಿಗೆ ಮಾತ್ರ ಗರಿಷ್ಠ ವಯೋಮಿತಿಯನ್ನು 02 ವರ್ಷಗಳಿಗೆ ಹೆಚ್ಚಿಸುವ ಹಾಗೂ ಅರ್ಜಿ ಸಲ್ಲಿಸಲು ಒಂದು ವಾರಗಳ ಕಾಲ ಅವಧಿಯನ್ನು ವಿಸ್ತರಿಸುವ ಕುರಿತಂತೆ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ/125/ಪಿಪಿಎ/2022 ಬೆಂಗಳೂರು, ದಿನಾಂಕ:03.11.2022</u>**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆ ಮತ್ತು ಪೊಲೀಸ್ ಕಾನ್ಸ್‌ಟೇಬಲ್ (ಸಿ.ಎ.ಆರ್ ಮತ್ತು ಡಿ.ಎ.ಆರ್) ಹುದ್ದೆಗಳಿಗೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಒಂದು ಬಾರಿಗೆ ಮಾತ್ರ 2022–23ನೇ ಸಾಲಿನಲ್ಲಿ ನೇಮಕಾತಿಗೆ ಕರೆದಿರುವ ಪೊಲೀಸ್ ಕಾನ್ಸ್‌ಟೇಬಲ್ (ಸಿ.ಎ.ಆರ್ ಮತ್ತು ಡಿ.ಎ.ಆರ್) 420+3064 (ಒಟ್ಟು 3484) ಹುದ್ದೆಗಳಿಗೆ ಮತ್ತು ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) 1137+454 (ಒಟ್ಟು 1591) ಹುದ್ದೆಗಳಿಗೆ ಮಾತ್ರ ಗರಿಷ್ಠ ವಯೋಮಿತಿಯನ್ನು ಎರಡು ವರ್ಷಗಳಿಗೆ ಹೆಚ್ಚಿಸಿ ಆದೇಶಿಸಿದೆ.

ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆ ಮತ್ತು ಪೊಲೀಸ್ ಕಾನ್ಸ್‌ಟೇಬಲ್ (ಸಿ.ಎ.ಆರ್ ಮತ್ತು ಡಿ.ಎ.ಆರ್) ಹುದ್ದೆಗಳ ಗರಿಷ್ಠ ವಯೋಮಿತಿಯ ಕುರಿತಂತೆ ಸಂಬಂಧಿಸಿದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಅಗತ್ಯ ತಿದ್ದುಪಡಿ ಮಾಡುವ ಷರತ್ತಿಗೊಳಪಟ್ಟು ಈ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Banadarangaiah NR

(ಬಾಣದರಂಗಯ್ಯ ಎನ್.ಆರ್) 03/11/22

ಸರ್ಕಾರದ ಅಧೀನ ಕಾರ್ಯದರ್ಶಿ,

ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು–ಬಿ)